**All India Radio: Bangalore**
**National Bulletin In Kannada**
**28.01.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.01.2025 13.10 p.m.**

**<><><><>**

ಮುಖ್ಯಾಂಶಗಳು

1. ಒಡಿಶಾದಲ್ಲಿ ಮೇಕ್ ಇನ್ ಒಡಿಶಾ ಕಾನ್ಕ್ಲೇವ್‌ಗೆ ಚಾಲನೆ ನೀಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ
2. ಮಹಾಕುಂಭ ಮೇಳದಲ್ಲಿ ನಾಳೆ ಮೌನಿ ಅಮಾವಾಸ್ಯೆ ಪ್ರಯುಕ್ತ ಪವಿತ್ರ ಸ್ನಾನಕ್ಕಾಗಿ ಸಾವಿರಾರು ಭಕ್ತರ ಆಗಮನ; ಯಾತ್ರಾರ್ಥಿಗಳಿಗೆ ಉತ್ತಮ ಆರೋಗ್ಯ ವ್ಯವಸ್ಥೆ ಕಲ್ಪಿಸಲು ಸರ್ಕಾರದಿಂದ ಸಿದ್ಧತೆ
3. ಉತ್ತರಾಖಂಡದಲ್ಲಿ ರಾಷ್ಟ್ರೀಯ ಕ್ರೀಡಾಕೂಟ ಇಂದು ಸಂಜೆ ಆರಂಭ
4. ಕ್ರಿಕೆಟ್: ರಾಜ್‌ಕೋಟ್‌ನಲ್ಲಿ ಇಂದು ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೂರನೇ ಟಿ - ೨೦ ಕ್ರಿಕೆಟ್ ಪಂದ್ಯ; ರಾತ್ರಿ ೭ ಗಂಟೆಗೆ ಪಂದ್ಯ ಆರಂಭ
5. ಥಾಯ್ಲೆಂಡ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಇಂದಿನಿಂದ ಆರಂಭ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಒಡಿಶಾಕ್ಕೆ ಭೇಟಿ ನೀಡಿದ್ದು, ಭುವನೇಶ್ವರದ ಜನತಾ ಮೈದಾನದಲ್ಲಿ ಉತ್ಕರ್ಷ್ ಒಡಿಶಾ - ಮೇಕ್ ಇನ್ ಒಡಿಶಾ ಕಾನ್ಕ್ಲೇವ್ ೨೦೨೫ನ್ನು ಉದ್ಘಾಟಿಸಿದರು. ಭಾರತವನ್ನು ಪ್ರಮುಖ ಹೂಡಿಕೆ ತಾಣ ಹಾಗೂ ಕೈಗಾರಿಕಾ ಕೇಂದ್ರವಾಗಿ ಸ್ಥಾಪಿಸುವ ಗುರಿಯನ್ನು ಹೊಂದಲಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹಲವಾರು ಯೋಜನೆಗಳನ್ನು ರೂಪಿಸಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು.

ಧ್ವನಿ : ನರೇಂದ್ರ ಮೋದಿ

ಉತ್ತಮ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವಲ್ಲಿ ರಾಜ್ಯದ ಸಾಧನೆಗಳನ್ನು ಎತ್ತಿ ತೋರಿಸುವ ಮೇಕ್ ಇನ್ ಒಡಿಶಾ ವಸ್ತುಪ್ರದರ್ಶನವನ್ನೂ ಕೂಡಾ ಪ್ರಧಾನಿಯವರು ಉದ್ಘಾಟಿಸಿದರು. ಎರಡು ದಿನಗಳ ಸಮಾವೇಶದಲ್ಲಿ ಉದ್ಯಮದ ನಾಯಕರು, ಹೂಡಿಕೆದಾರರು

ಮತ್ತು ನೀತಿ ನಿರೂಪಕರು ಭಾಗವಹಿಲಿದ್ದಾರೆ. ಈ ಸಮಾವೇಶದಲ್ಲಿ ದುಂಡುಮೇಜಿನ ಸಭೆಗಳು, ವಲಯ ಅಧಿವೇಶನಗಳು, ವಿಶೇಷ ಸಭೆಗಳು ಮತ್ತು ನೀತಿ ಚರ್ಚೆಗಳನ್ನು ಆಯೋಜಿಸಲಿದ್ದು, ವಿಶ್ವದಾದ್ಯಂತದ ಹೂಡಿಕೆದಾರರನ್ನು ಆಕರ್ಷಿಸುವ ವೇದಿಕೆಯಾಗಿದೆ. ೨೦ ವಿದೇಶಿಯರು ಸೇರಿದಂತೆ ೭ ಸಾವಿರದ ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಒಡಿಶಾ ಅತ್ಯಂತ ದೊಡ್ಡ ವ್ಯಾಪಾರ ಸಮಾವೇಶವನ್ನು ಆಯೋಜಿಸಲು ಸಕಲ ಸಿದ್ಧತೆ ಕೈಗೊಂಡಿದೆ. ಸಮಾವೇಶದಲ್ಲಿ ೧೦೦ಕ್ಕೂ ಹೆಚ್ಚು ಒಪ್ಪಂದಗಳಿಗೆ ಸಹಿ ಹಾಕಲಾಗುವುದು. ಇದು ೩೩ ಲಕ್ಷ ಜನರಿಗೆ ಉದ್ಯೋಗವನ್ನು ಸೃಷ್ಟಿಸುವ ನಿರೀಕ್ಷೆ ಇದೆ.

<><><>

ವಿಶ್ವದ ಅತಿದೊಡ್ಡ ಧಾರ್ಮಿಕ ಮತ್ತು ಮಾನವೀಯ ಕಾರ್ಯಕ್ರಮವಾದ ಮಹಾ ಕುಂಭಮೇಳದ ಚಿತ್ರಗಳನ್ನು ಬಾಹ್ಯಾಕಾಶದಿಂದಲೂ ಸೆರೆಹಿಡಿಯಲಾಗಿದೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದಿಂದ ಮಹಾಕುಂಭ ಮೇಳವು ರಾತ್ರಿ ವೇಳೆಯಲ್ಲಿ ಕಂಡುಬಂದ ಅದ್ಭುತ ಚಿತ್ರಗಳನ್ನು ಸೆರೆಹಿಡಿದಿದೆ. ಈ ಚಿತ್ರಗಳಲ್ಲಿ, ಮಹಾಕುಂಭ ಮೇಳ ಮತ್ತು ಡೇರೆ ನಗರ ಮನೋಜ್ಞವಾಗಿ ಚಿತ್ರಿತಗೊಂಡಿದೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದ ಚಿತ್ರಗಳು ಗಂಗಾ ನದಿಯ ದಡದಲ್ಲಿ ದೀಪಗಳಿಂದ ಪ್ರಜ್ವಲಿಸುತ್ತಿರುವ ವಿಶ್ವದ ಅತಿದೊಡ್ಡ ಮಾನವ ಸಭೆಯನ್ನು ತೋರಿಸುತ್ತವೆ. ಈ ಚಿತ್ರಗಳನ್ನು ಐಎಸ್ಎಸ್‌ನ ಗಗನಯಾತ್ರಿ ಡಾನ್ ಪೆಟ್ಟಿಟ್ ಅವರು ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ೨೦೨೫ರ ಮಹಾ ಕುಂಭಮೇಳದ ಅದ್ಭುತ ನೋಟ ಕಂಡುಬಂದಿದೆ ಹಾಗೂ ಜಗತ್ತಿನ ಅತಿದೊಡ್ಡ ಮಾನವ ಸಭೆ ಗಂಗಾ ನದಿಯ ದಡದಲ್ಲಿ ದೀಪಗಳಿಂದ ಹೊಳೆಯುತ್ತಿತ್ತು ಎಂದು ಬರೆದಿದ್ದಾರೆ. ಅಮೆರಿಕನ್ ಗಗನಯಾತ್ರಿ ಡೊನಾಲ್ಡ್ ರಾಯ್ ಪೆಟ್ಟಿಟ್ ಅವರು ತಮ್ಮ ಖಗೋಳ ಛಾಯಾಗ್ರಹಣ ಮತ್ತು ಕಕ್ಷೆಯಲ್ಲಿನ ನಾವೀನ್ಯತೆಗಾಗಿ ಹೆಸರುವಾಸಿಯಾಗಿದ್ದಾರೆ. ಪೆಟಿಟ್ ಬಾಹ್ಯಾಕಾಶದಲ್ಲಿ ರಚಿಸಲಾದ ಮೊದಲ ಪೇಟೆಂಟ್ ಪಡೆದ ವಸ್ತುವಾದ "ಝೀರೋ ಜಿ ಕಪ್" ನ ಸಂಶೋಧಕರೂ ಆಗಿದ್ದಾರೆ. ೬೯ ವರ್ಷ ವಯಸ್ಸಿನ ಪೆಟ್ಟಿಟ್, ನಾಸಾದ ಅತ್ಯಂತ ಹಿರಿಯ ಸಕ್ರಿಯ ಗಗನಯಾತ್ರಿ. ಅವರು ಕಳೆದ ೫೫೫ ದಿನಗಳಿಂದ ಐಎಸ್ಎಸ್‌ನಲ್ಲಿದ್ದಾರೆ. ನಾಳೆ ಮೌನಿ ಅಮಾವಾಸ್ಯೆಯ ಹಿನ್ನೆಲೆಯಲ್ಲಿ, ಪ್ರಯಾಗರಾಜ್‌ನಲ್ಲಿ ನಡೆಯುವ ಮಹಾಕುಂಭದಲ್ಲಿ ಭಾಗವಹಿಸುವ ಭಕ್ತರು ಮತ್ತು ಯಾತ್ರಾರ್ಥಿಗಳಿಗೆ ಉತ್ತಮ ಆರೋಗ್ಯ ವ್ಯವಸ್ಥೆಯನ್ನು ಮಾಡಲಾಗಿದೆ. ಯಾವುದೇ

ಆರೋಗ್ಯ ತುರ್ತು ಪರಿಸ್ಥಿತಿಯನ್ನು ಎದುರಿಸಲು ಪರೇಡ್ ಮೈದಾನದಲ್ಲಿರುವ ಸೆಂಟ್ರಲ್ ಆಸ್ಪತ್ರೆ ಸಂಪೂರ್ಣವಾಗಿ ಸಜ್ಜಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಮಹಾ ಕುಂಭಮೇಳವು ಜಗತ್ತಿನ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ. ಇದರಲ್ಲಿ ಲಕ್ಷಾಂತರ ಭಕ್ತರು ಗಂಗಾ ನದಿಯಲ್ಲಿ ಸ್ನಾನ ಮಾಡುವ ಮೂಲಕ ಆಧ್ಯಾತ್ಮಿಕ ಶಾಂತಿಯನ್ನು ಪಡೆಯುತ್ತಾರೆ. ಇಲ್ಲಿಯವರೆಗೆ, ೧೩ ಕೋಟಿಗೂ ಹೆಚ್ಚು ಭಕ್ತರು ಸಂಗಮದಲ್ಲಿ ಸ್ನಾನ ಮಾಡುವ ಮೂಲಕ ಧಾರ್ಮಿಕ ಭಾವನೆಯೊಂದಿಗೆ ಪುನೀತರಾಗಿದ್ದಾರೆ. ಮಹಾ ಕುಂಭಮೇಳದ ಮೊದಲ ಅಮೃತ ಸ್ನಾನ ಜನವರಿ ೧೩ರಂದು ನಡೆಯಿತು. ಎರಡನೇ ಅಮೃತ ಸ್ನಾನವು ನಾಳೆ ಅಂದರೆ ಜನವರಿ ೨೯ರಂದು ಮೌನಿ ಅಮಾವಾಸ್ಯೆಯಂದು ನಡೆಯಲಿದೆ. ಮಹಾ ಕುಂಭಮೇಳ ಫೆಬ್ರವರಿ ೨೬ ರಂದು ಕೊನೆಗೊಳ್ಳಲಿದೆ.

<><><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಇಂದು ಅಬುಧಾಬಿಯಲ್ಲಿ ನಡೆಯುವ ರೈಸಿನಾ ಮಧ್ಯಪ್ರಾಚ್ಯ ಅಧಿವೇಶನದಲ್ಲಿ ಮುಖ್ಯ ಭಾಷಣ ಮಾಡಲಿದ್ದಾರೆ. ಯುಎಇಗೆ ಮೂರು ದಿನಗಳ ದ್ವಿಪಕ್ಷೀಯ ಭೇಟಿಯ ಸಂದರ್ಭದಲ್ಲಿ ಅಬುಧಾಬಿಯಲ್ಲಿರುವ ಭಾರತೀಯ ರಾಯಭಾರ ಕಚೇರಿ ಆಯೋಜಿಸಿದ್ದ ೭೬ ನೇ ಗಣರಾಜ್ಯೋತ್ಸವದಲ್ಲಿ ಸಚಿವರು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜಾಗತಿಕ ವ್ಯವಸ್ಥೆಯು ಗಮನಾರ್ಹ ಪರಿವರ್ತನೆಗೆ ಒಳಗಾಗುತ್ತಿರುವ ಸಮಯದಲ್ಲಿ ಭಾರತ ಮತ್ತು ಯುಎಇ ನಡುವೆ ಬೆಳೆಯುತ್ತಿರುವ ಸಿನರ್ಜಿಯನ್ನು ಒತ್ತಿ ಹೇಳಿದರು.

ಧ್ವನಿ: ಡಾ. ಎಸ್. ಜೈಶಂಕರ್ (೧೬ ಸೆಕೆಂಡ್)

ಪ್ರಧಾನಿ ನರೇಂದ್ರ ಮೋದಿ ಮತ್ತು ಎಮಿರೇಟ್ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರ ಜಂಟಿ ದೃಷ್ಟಿಕೋನದಡಿಯಲ್ಲಿ, ಪಾಲುದಾರಿಕೆಯು ಗಮನಾರ್ಹ ಮೈಲಿಗಲ್ಲುಗಳನ್ನು ಸಾಧಿಸಿದೆ ಎಂದು ಡಾ. ಜೈಶಂಕರ್ ಹೇಳಿದರು. ವಲಸಿಗರ ಜೀವನ ಗುಣಮಟ್ಟವನ್ನು ಸುಧಾರಿಸುವ ಭಾರತದ ಬದ್ಧತೆಯ ಬಗ್ಗೆ ಅವರು ಭರವಸೆ ನೀಡಿದರು ಮತ್ತು ಯುಎಇ ಸರ್ಕಾರದ ಸಕ್ರಿಯ ಬೆಂಬಲಕ್ಕಾಗಿ ಕೃತಜ್ಞತೆಯನ್ನು ವ್ಯಕ್ತಪಡಿಸಿದರು.

<><><><>

ಉತ್ತರ ದೆಹಲಿಯ ಬುರಾರಿಯಲ್ಲಿ ಹೊಸದಾಗಿ ನಿರ್ಮಿಸಲಾಗಿದ್ದ ನಾಲ್ಕು ಅಂತಸ್ತಿನ ಕಟ್ಟಡವೊಂದು ಕುಸಿದಿದ್ದು, ಅವಶೇಷಗಳಡಿಯಲ್ಲಿ ಸಿಲುಕಿದ್ದ ೧೨ ಮಂದಿಯನ್ನು ರಕ್ಷಿಸಲಾಗಿದೆ. ಆಸ್ಕರ್ ಪಬ್ಲಿಕ್ ಸ್ಕೂಲ್ ಬಳಿ ಹೊಸದಾಗಿ ನಿರ್ಮಿಸಲಾಗಿದ್ದ ಕಟ್ಟಡವು ಸೋಮವಾರ ರಾತ್ರಿ ಕುಸಿದಿದೆ. ಅವಶೇಷಗಳಡಿ ಹಲವರು ಸಿಲುಕಿರುವ ಶಂಕೆ ಹಿನ್ನೆಲೆಯಲ್ಲಿ ರಕ್ಷಣಾ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಡೆಹ್ರಾಡೂನ್‌ನಲ್ಲಿ ೩೮ನೇ ರಾಷ್ಟ್ರೀಯ ಕ್ರೀಡಾಕೂಟವನ್ನು ಉದ್ಘಾಟಿಸಲಿದ್ದಾರೆ. ಜನವರಿ ೨೮ರಿಂದ ಫೆಬ್ರವರಿ ೧೪ರವರೆಗೆ ಉತ್ತರಾಖಂಡದ ೮ ಜಿಲ್ಲೆಗಳ ೧೧ ನಗರಗಳಲ್ಲಿ ಈ ಕ್ರೀಡಾಕೂಟವು ನಡೆಯಲಿದೆ. ಉತ್ತರಾಖಂಡದ ರಜತ ಮಹೋತ್ಸವದ ಸಂದರ್ಭದಲ್ಲಿ ಈ ರಾಷ್ಟ್ರೀಯ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದೆ. ೩೬ ರಾಜ್ಯ, ಕೇಂದ್ರಾಡಳಿತ ಪ್ರದೇಶದ ತಂಡಗಳು ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಲಿವೆ. ೧೭ ದಿನಗಳ ಕಾಲ ೩೫ ಕ್ರೀಡಾ ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ೩೩ ಕ್ರೀಡೆಗಳಿಗೆ ಪದಕಗಳನ್ನು ನೀಡಲಾಗುವುದು, ಯೋಗ ಮತ್ತು ಮಲ್ಲಕಂಬವನ್ನು ಮೊದಲ ಬಾರಿಗೆ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಸೇರಿಸಲಾಗಿದೆ. ಈ ಕ್ರೀಡಾಕೂಟದಲ್ಲಿ ೧೦,೦೦೦ ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಸುಸ್ಥಿರತೆಯ ಮೇಲೆ ಗಮನವನ್ನು ಕೇಂದ್ರೀಕರಿಸಿ, ಈ ವರ್ಷದ ರಾಷ್ಟ್ರೀಯ ಕ್ರೀಡಾಕೂಟದ ಶೀರ್ಷಿಕೆಯನ್ನು "ಗ್ರೀನ್ ಗೇಮ್ಸ್" ಎಂದು ನಿರ್ಧರಿಸಲಾಗಿದೆ. ಕ್ರೀಡಾ ಅರಣ್ಯ ಎಂದು ಕರೆಯಲ್ಪಡುವ ವಿಶೇಷ ಉದ್ಯಾನವನವನ್ನು ಈ ಸ್ಥಳದಲ್ಲಿ ಅಭಿವೃದ್ಧಿಪಡಿಸಲಾಗುವುದು. ಈ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸುವ ಅತಿಥಿಗಳು ಮತ್ತು ಕ್ರೀಡಾಪಟುಗಳು ೧೦ ಸಾವಿರಕ್ಕೂ ಹೆಚ್ಚು ಸಸಿಗಳನ್ನು ನೆಡಲಿದ್ದಾರೆ. ಕೇಂದ್ರ ಸಚಿವರು, ಭಾರತೀಯ ಒಲಿಂಪಿಕ್ ಸಂಘ, ರಾಷ್ಟ್ರೀಯ ಆಟಗಾರರು ಸೇರಿ ವಿವಿಧ ಅತಿಥಿಗಳು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಭಾರತೀಯ ಒಲಿಂಪಿಕ್ ಸಂಘದ ಅಧ್ಯಕ್ಷೆ ಪಿ.ಟಿ. ಉಷಾ ಈಗಾಗಲೇ ಡೆಹ್ರಾಡೂನ್‌ಗೆ ಆಗಮಿಸಿದ್ದಾರೆ. ಉದ್ಘಾಟನೆಗೆ ಎಲ್ಲಾ ಸಿದ್ಧತೆಗಳು ನಡೆದಿದ್ದು, ಮುಂದಿನ ತಿಂಗಳ ೧೪ರವರೆಗೆ ಉತ್ತರಾಖಂಡದ ೮ ಜಿಲ್ಲೆಗಳ ೧೧ ನಗರಗಳಲ್ಲಿ ರಾಷ್ಟ್ರೀಯ ಕ್ರೀಡಾಕೂಟವನ್ನು ನಡೆಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ೩೫ ಪಂದ್ಯಗಳ ಒಟ್ಟು ೪೭ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

<><><>

ಒಮಾನ್‌ಗೆ ಭೇಟಿ ನೀಡುತ್ತಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಒಮಾನ್‌ನ ವಾಣಿಜ್ಯ, ಕೈಗಾರಿಕೆ ಮತ್ತು ಹೂಡಿಕೆ ಪ್ರಚಾರ ಸಚಿವ ಕೈಸ್ ಬಿನ್ ಮೊಹಮ್ಮದ್ ಅಲ್ ಯೂಸೆಫ್ ಅವರೊಂದಿಗೆ ಮಾತುಕತೆ ನಡೆಸಿದರು. ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ (ಸಿಇಪಿಎ) ಗಾಗಿ ಮಾತುಕತೆಗಳನ್ನು ಮುಂದುವರಿಸುವುದು, ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಬಲಪಡಿಸುವುದು ಮತ್ತು ಸಹಯೋಗಕ್ಕಾಗಿ ಹೊಸ ಮಾರ್ಗಗಳನ್ನು ಗುರುತಿಸುವ ವಿಷಯಗಳ ಬಗ್ಗೆ ಉಭಯ ನಾಯಕರು ಸಮಾಲೋಚನೆ ನಡೆಸಿದರು. ನಂತರ ಮಾತನಾಡಿದ ಸಚಿವ ಪಿಯೂಷ್ ಗೋಯಲ್, ಈ ಚರ್ಚೆಯು ಅತ್ಯಂತ ಫಲಪ್ರದವಾಗಿದ್ದು, ಭವಿಷ್ಯದಲ್ಲಿ ಉಭಯ ದೇಶಗಳಿಗೆ ಪೂರಕವಾಗುವ ಯೋಜನೆಗಳನ್ನು ಅನುಷ್ಠಾನಕ್ಕೆ ತರುವ ಆಶಾವಾದವಿದೆ. ಮುಂಬರುವ ಸಭೆಯಲ್ಲಿ ಮತ್ತಷ್ಟು ಕ್ಷಿಪ್ರಗತಿಯಲ್ಲಿ ಕಾರ್ಯಾಚರಣೆ ನಡೆಸುವತ್ತ ಚರ್ಚಿಸಲಾಗುವುದು ಎಂದು ಹೇಳಿದರು.

<><><>

ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೂರನೇ ಟಿ-೨೦ ಕ್ರಿಕೆಟ್ ಪಂದ್ಯ ಇಂದು ನಡೆಯಲಿದೆ. ಗುಜರಾತ್‌ನ ರಾಜ್‌ಕೋಟ್‌ನಲ್ಲಿರುವ ನಿರಂಜನ್ ಷಾ ಸ್ಟೇಡಿಯಂನಲ್ಲಿ ಈ ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಭಾರತ ತಂಡ ಐದು ಪಂದ್ಯಗಳ ಸರಣಿಯಲ್ಲಿ ೨-೦ ಮುನ್ನಡೆ ಸಾಧಿಸಿದೆ. ಸರಣಿಯ ಆರಂಭಿಕ ಪಂದ್ಯದಲ್ಲಿ, ಕೋಲ್ಕತ್ತಾದಲ್ಲಿ ಭಾರತ ತಂಡ ಏಳು ವಿಕೆಟ್‌ಗಳಿಂದ ಇಂಗ್ಲೆಂಡ್ ಅನ್ನು ಸೋಲಿಸಿತು. ಚೆನ್ನೈನ ಎಂಎ ಚಿದಂಬರಂ ಸ್ಟೇಡಿಯಂನಲ್ಲಿ ನಡೆದ ಎರಡನೇ ಟಿ೨೦ ಪಂದ್ಯದಲ್ಲಿ ಭಾರತ ಎರಡು ವಿಕೆಟ್‌ಗಳ ರೋಚಕ ಗೆಲುವು ಸಾಧಿಸಿತು.

<><><>

ಥೈಲ್ಯಾಂಡ್ ಮಾಸ್ಟರ್ಸ್ ೨೦೨೫ ಬ್ಯಾಡ್ಮಿಂಟನ್ ಪಂದ್ಯಾವಳಿ ಇಂದು ಬ್ಯಾಂಕಾಕ್‌ನ ನಿಮಿಬುಟ್ರ್ ಕ್ರೀಡಾಂಗಣದಲ್ಲಿ ಆರಂಭವಾಗಲಿದೆ. ವಿಶ್ವದ ಮಾಜಿ ನಂ. ೧ ಆಟಗಾರ ಕಿಡಂಬಿ ಶ್ರೀಕಾಂತ್ ಈ ಪಂದ್ಯಾವಳಿಯಲ್ಲಿ ಭಾರತದ ನಾಯಕತ್ವ ವಹಿಸಲಿದ್ದಾರೆ. ಪುರುಷರ ಸಿಂಗಲ್ಸ್‌ನ ಆರಂಭಿಕ ಸುತ್ತಿನಲ್ಲಿ ಅವರು ಇಸ್ರೇಲ್‌ನ ಡೇನಿಯಲ್ ಡುಬೊವೆಂಕೊ ಅವರನ್ನು ಎದುರಿಸಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>